# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 21.11.2020 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್ ರವಿಕುಮಾರ್ ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್ ರವಿಕುಮಾರ್ | ನೋಡಲ್ ಅಧಿಕಾರಿ-ವಾರ್ಡ್ ನಂ.71, ಸಹಾಯಕ ನಿರ್ದೇಶಕರು (ಪಶುಪಾಲನೆ) |
| 2 | ಶ್ರೀ ಮಂಜುನಾಥ್ ಡಿ ಎಸ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 71 |
| 3 | ಶಿವಲಿಂಗಯ್ಯ.ಕೆ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 |
| 4 | ಚೇತನ್ | ಗುತ್ತಿಗೆದಾರರು- ಬೀದಿದೀಪ |
| 5 | ಸುರೇಶ್ ಎಂ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 |
| 6 | ವೆಂಕಟರಾಜು | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ (ಹೆಗ್ಗನಹಳ್ಳಿ ನಾಗರೀಕರ ಹಿತ ರಕ್ಷಣಾ ವೇದಿಕೆ) |
| 7 | ಪ್ರಕಾಶ್ ಹೆಚ್ ಆರ್ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 8 | ರಂಗನಾಥ್ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |

:ನಡಾವಳಿಯ ವರದಿ:

➢ ಕಾರ್ಯದರ್ಶಿಗಳಾದ ಶ್ರೀ ಡಿ.ಎಸ್.ಮಂಜುನಾಥ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- <u>ಸ್ವಚ್ಛತೆ ಮತ್ತು ಘನ ತ್ಯಾಜ್ಯ ನಿರ್ವಹಣೆ ಬಗ್ಗೆ:</u>
  - ಸುರೇಶ್ ಎಂ, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 ಮಾತನಾಡಿ ವಾರ್ಡ್ 71ರ ವ್ಯಾಪ್ತಿಯಲ್ಲಿ 34 ಬ್ಲಾಕ್‌ಗಳಿದ್ದು, ಒಟ್ಟು 34 ಆಟೋ ಟಿಪ್ಪರ್‌ಗಳು, 2 ಕಾಂಪ್ಯಾಕ್ಟರ್‌ಗಳು ಕಾರ್ಯನಿರ್ವಹಿಸುತ್ತಿದ್ದು, ಇವುಗಳಲ್ಲಿ 34 ಆಟೋಗಳಿಗೂ ಆರ್.ಎಫ್.ಐ.ಡಿಯನ್ನು ಅಳವಡಿಸಿದ್ದು, 18 ಆಟೋಗಳಿಗೆ ಜಿ.ಪಿ.ಎಸ್ ಅನ್ನು ಅಳವಡಿಸಲಾಗಿರುತ್ತದೆ ಎಂಬ ಮಾಹಿತಿಯನ್ನು ಸಭೆಗೆ ನೀಡಿದರು.
  - ಮುಂದುವರೆದು ಮಾತನಾಡುತ್ತಾ, ಹಸಿತ್ಯಾಜ್ಯವನ್ನು ಪ್ರತಿದಿನ ಬೆಳಿಗ್ಗೆ 6.30 ಇಂದ ಬೆಳಿಗ್ಗೆ 9.45ರವರೆಗೆ ಸಂಗ್ರಹಿಸಲಾಗುತ್ತಿದೆ. GVP clearance: ಬೆಳಿಗ್ಗೆ 10.30 ಇಂದ ಮಧ್ಯಾಹ್ನ 2.00 ರವರೆಗೆ ನಿರ್ವಹಿಸಲಾಗುತ್ತಿದೆ ಹಾಗೂ ಒಣಕಸವನ್ನು ಶನಿವಾರ ಮತ್ತು ಬುಧವಾರ ಸಂಗ್ರಹಿಸಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು.

- ಶ್ರೀ ವೆಂಕಟರಾಜು, ಆದ್ಯಕ್ಷರು, (ಹೆಗ್ಗನಹಳ್ಳಿ ನಾಗರೀಕರ ಹಿತ ರಕ್ಷಣಾ ವೇದಿಕೆ) ರವರು ಮಾತನಾಡಿ ಸಾರ್ವಜನಿಕರು ಎಲ್ಲೆಂದರಲ್ಲಿ ಖಾಲಿ ಇರುವ ಜಾಗಗಳಲ್ಲಿ ಕಸ ಸುರಿಯುತ್ತಿದದ್ದು, ಈ ಬಗ್ಗೆ ಕ್ರಮ ವಹಿಸಲು ಕೋರಿದರು.
  - ❖ ಇದಕ್ಕೆ ಶಿವಲಿಂಗಯ್ಯ.ಕೆ. ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರು ಈ ಬಗ್ಗೆ ಮಾರ್ಷಲ್‌ಗಳಿಗೆ ಗಸ್ತು ನಡೆಸಲು ಸೂಚಿಸಿ ಜನಗಳಲ್ಲಿ ಜಾಗೃತಿ ಮೂಡಿಸಲಾಗುವುದೆಂದು ತಿಳಿಸಿದರು.

- **ಕೋವಿಡ್-19, ಸಾಂಕ್ರಾಮಿಕ ರೋಗದ ಬಗ್ಗೆ**
  - ಶಿವಲಿಂಗಯ್ಯ.ಕೆ. ಹಿರಿಯ ಆರೋಗ್ಯ ಪರಿವೀಕ್ಷಕರು. ವಾರ್ಡ್ ನಂ.71 ರವರು ಮಾತಾನಾಡಿ ವಾರ್ಡ್ 71ರ ವ್ಯಾಪ್ತಿಯಲ್ಲಿ ಒಟ್ಟು 13929 ರ್‍ಯಾಪಿಡ್ ಟೆಸ್ಟ್‌ಗಳನ್ನು ನಡೆಸಲಾಗಿದ್ದು, ಒಟ್ಟಾರೆಯಾಗಿ ಸೋಂಕಿತರ ಪ್ರಮಾಣದಲ್ಲಿ ಇಳಿಕೆಯಾಗಿರುತ್ತದೆ ಎಂದು ಮಾಹಿತಿ ನೀಡಿದರು ಹಾಗೂ ವಾರ್ಡ್ 71ರ ವ್ಯಾಪ್ತಿಯಲ್ಲಿ ದಿನಾಂಕ:11/11/2020 ರಿಂದ 20/11/2020 ರವರೆಗೆ 84 ಮಂದಿ ಮಾಸ್ಕ್ ಧರಿಸದವರಿಂದ ರೂ.21000/-ಗಳ ದಂಡವನ್ನು ಸಂಗ್ರಹಿಸಲಾಗಿದೆ ಹಾಗೂ ಮಾಸ್ಕ್ ಧರಿಸಲು ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗಿದೆ ಎಂದು ತಿಳಿಸಿದರು.

- **ರಸ್ತೆ ಗುಂಡಿಗಳ ನಿರ್ವಹಣೆ ಬಗ್ಗೆ**
  - ಮಂಜುನಾಥ್ ಡಿ.ಎಸ್ ಸಹಾಯಕ ಅಭಿಯಂತರರು, ವಾರ್ಡ್ ನಂ.71 ರವರು ಮಾತನಾಡಿ ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಟ್ಟಿ ಮಾಡಿಕೊಂಡು ವೆಟ್ ಮಿಕ್ಸ್ ಅಳವಡಿಸಲಾಗಿದೆ. ಇನ್ನು 4-5 ದಿನಗಳಲ್ಲಿ ಡಾಂಬರು ಹಾಕಲಾಗುವುದು ಎಂದು ತಿಳಿಸಿದರು.

- **ಕಾಮಗಾರಿಗಳ ಬಗ್ಗೆ**
  - ಶ್ರೀ ವೆಂಕಟರಾಜು, ಆದ್ಯಕ್ಷರು, (ಹೆಗ್ಗನಹಳ್ಳಿ ನಾಗರೀಕರ ಹಿತ ರಕ್ಷಣಾ ವೇದಿಕೆ) ರವರು ಮಾತನಾಡಿ ಹೊಯ್ಸಳನಗರದ ಪೈಪ್‌ಲೈನ್ ರಸ್ತೆಯನ್ನು ದುರಸ್ತಿಪಡಿಸಲು ಕೋರಿದರು.
    - ❖ ಇದಕ್ಕೆ ಡಿ.ಎಸ್.ಮಂಜುನಾಥ್ ಸಹಾಯಕ ಅಭಿಯಂತರರು, ವಾರ್ಡ್ ನಂ.71 ರವರು ಪ್ರತಿಕ್ರಿಯಿಸಿ ಸದರಿ ರಸ್ತೆಯಲ್ಲಿ ಕಿತ್ತುಹೋಗಿರುವ ಕಡೆಗಳಲ್ಲಿ ವೆಟ್ ಮಿಕ್ಸ್ ಅಳವಡಿಸಲಾಗಿದ್ದು, ಶೀಘ್ರದಲ್ಲಿ ಡಾಂಬರು ಹಾಕಲಾಗುವುದು ಎಂದು ತಿಳಿಸಿದರು.

➢ ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಡಿ ಎಸ್ ಮಂಜುನಾಥ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ-ವಾರ್ಡ್ 71 ಹಾಗೂ
ಸಹಾಯಕ ಅಭಿಯಂತರರು,

(ಬಿ.ಆರ್ ರವಿಕುಮಾರ್)
ನೋಡಲ್ ಅಧಿಕಾರಿ ವಾರ್ಡ್-70

**ಪ್ರತಿಯನ್ನು:**

1) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
2) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
3) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.

4) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
6) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
7) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
8) ಪೋಲೀಸ್ ಸಬ್ ಇನ್ಸ್‌ಪೆಕ್ಟರ್ ರಾಜಗೋಪಾಲನಗರ ಪೋಲೀಸ್ ಠಾಣೆ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
9) ಕಛೇರಿ ಕಡತಕ್ಕೆ